# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : (409) 405

ಸದಸ್ಯರ ಹೆಸರು : ಶ್ರೀ ಕೆ.ವಿ.ನಾರಾಯಣಸ್ವಾಮಿ
(ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರಿಸುವ ದಿನಾಂಕ : 23-09-2020

ಉತ್ತರಿಸುವ ಸಚಿವರು : ಕಂದಾಯ ಸಚಿವರು

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರು ನಗರ ಜಿಲ್ಲೆಯ ಯಲಹಂಕ ತಾಲ್ಲೂಕಿನಲ್ಲಿ ಬಗರ್ ಹುಕುಂ ಸಾಗುವಳಿ ಜಮೀನು ಮಂಜೂರಾತಿಗಾಗಿ ಬಾಕಿಯಿರುವ ಅರ್ಜಿಗಳೆಷ್ಟು; | ಬೆಂಗಳೂರು ನಗರ ಜಿಲ್ಲೆಯ ಯಲಹಂಕ ತಾಲ್ಲೂಕಿನಲ್ಲಿ ಬಗರ್‌ಹುಕುಂ ಸಾಗುವಳಿ ಸಕ್ರಮೀಕರಣಕ್ಕಾಗಿ ಯಾವುದೇ ಅರ್ಜಿಗಳು ಬಾಕಿ ಇರುವುದಿಲ್ಲ. |
| ಆ) | ಬೆಂಗಳೂರು ನಗರ ಜಿಲ್ಲೆಯ ಯಲಹಂಕ ತಾಲ್ಲೂಕಿನಲ್ಲಿ ಬಗರ್ ಹುಕುಂ ಸಮಿತಿ ಕಾರ್ಯನಿರ್ವಹಿಸುತ್ತಿದೆಯೇ; | ಕರ್ನಾಟಕ ಭೂ ಕಂದಾಯ ಕಾಯ್ದೆ, 1964ರ ಕಲಂ 94-ಎ(4) ರಲ್ಲಿನ ಕೋಷ್ಟಕದಲ್ಲಿ ನಿರ್ದಿಷ್ಟಪಡಿಸಿರುವಂತೆ ಬೆಂಗಳೂರು ನಗರ ಜಿಲ್ಲೆಯ ಯಲಹಂಕ ತಾಲ್ಲೂಕು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ 18 ಕಿ.ಮೀ. ವ್ಯಾಪ್ತಿಯೊಳಗೆ ಇರುವುದರಿಂದ ನಿರ್ಬಂಧಿತ ಅಂತರದೊಳಗಿನ ಈ ತಾಲ್ಲೂಕಿಗೆ ಬಗರ್‌ಹುಕುಂ ಸಾಗುವಳಿ ಸಕ್ರಮೀಕರಣ ಸಮಿತಿ ರಚಿಸಲು ಕಾಯ್ದೆ / ನಿಯಮಗಳಲ್ಲಿ ಅವಕಾಶವಿರುವುದಿಲ್ಲ. |
| ಇ) | ಭೂ ಮಂಜೂರಾತಿ ಸಮಿತಿ ಇಲ್ಲದ ಪಕ್ಷದಲ್ಲಿ ಬಾಕಿಯಿರುವ ಅರ್ಜಿಗಳ (ಫಾರಂ-ನಂ53) ಪರಿಸ್ಥಿತಿಯೇನು; | ಉದ್ಭವಿಸುವುದಿಲ್ಲ. |
| ಈ) | ಬಾಕಿಯಿರುವ ಅರ್ಜಿಗಳನ್ನು ವಿಲೇಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು? | ಉದ್ಭವಿಸುವುದಿಲ್ಲ. |

ಸಂಖ್ಯೆ: ಆರ್‌ಡಿ 116 ಎಲ್‌ಜಿಕ್ಯೂ 2020

(ಆರ್. ಅಶೋಕ)
ಕಂದಾಯ ಸಚಿವರು